COMPT/UPLOK/MYS/2717/2022/P.O./A.R.E.17

## ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಎಂವೈಎಸ್/2717/2022 ಬಹುಮಹಡಿಗಳ ಕಟ್ಟಡ,
ಮಂಡನಾಧಿಕಾರಿಗಳ ಶಾಖೆ, ಪಿ.ಓ. ಎ.ಆರ್.ಇ.17 ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 22/05/2023

### ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಶ್ರೀ ಸಿ. ಎ. ಕೀರ್ತಿಕುಮಾರ ತಂದೆ ಅಪ್ಪಣ್ಣ ಗೌಡ, ಕಾರ್ಯದರ್ಶಿ, ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ನಿ. ಹೆಚ್. ಮೈಲನಹಳ್ಳಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ ರವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

ಶ್ರೀ ಹೆಚ್. ಎಲ್. ಶಿವಬಸಪ್ಪ, ಪೋಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಹಾಸನ (ಇನ್ನು ಮುಂದೆ ದೂರುದಾರರೆಂದು ಉಲ್ಲೇಖಿಸಲಾಗುವುದು) ಇವರಿಗೆ ಬಂದ ಮಾಹಿತಿ ಮೇರೆಗೆ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಿ, ಸೋರ್ಸ್ ವರದಿಯನ್ನು ಆರಕ್ಷಕ ಅಧೀಕ್ಷಕರವರು ಕರ್ನಾಟಕ ಲೋಕಾಯುಕ್ತ, ಹಾಸನ ಇವರಿಗೆ ಸಲ್ಲಿಸಿದ್ದು, ನಂತರ ಪೋಲೀಸ್ ಅಧೀಕ್ಷಕರು ಸೋರ್ಸ್ ವರದಿಯ ಆಧಾರದ ಮೇಲೆ ಶ್ರೀ ಹೆಚ್. ಎಲ್. ಶಿವಬಸಪ್ಪ, ಪೋಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಹಾಸನ ಇವರಿಗೆ ಸಲ್ಲಿಸಿದ್ದು, ಸದರಿಯವರು ಶ್ರೀ ಸಿ. ಎ. ಕೀರ್ತಿಕುಮಾರ ತಂದೆ ಅಪ್ಪಣ್ಣ ಗೌಡ, ಕಾರ್ಯದರ್ಶಿ, ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ನಿ. ಹೆಚ್. ಮೈಲನಹಳ್ಳಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಉಲ್ಲೇಖಿಸಲಾಗುವುದು) ಇವರ ವಿರುದ್ಧ ಹಾಸನ ಲೋಕಾಯುಕ್ತ ಪೋಲೀಸ್ ಠಾಣೆಯ ಗುನ್ನೆ ನಂ. 14/2012 ರಲ್ಲಿ ಕಲಂ 13 (1)(ಇ) ಸಹ ಕಲಂ 13(2) ಪಿ.ಸಿ. ಕಾಯಿದೆ 1988 ರಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984

COMPT/UPLOK/MYS/2717/2022/P.O./A.R.E.17

ರ ಕಲಂ 7 (2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) ತನಿಖಾಧಿಕಾರಿಗಳು ಪ್ರಕರಣದ ತನಿಖೆಯ ಸಮಯದಲ್ಲಿ ಎದುರುದಾರರು ದಿನಾಂಕ 18/09/1998 ರಿಂದ ದಿ: 19/12/2012 ರ ವರೆಗೆ ಅವರ ಮತ್ತು ಅವರ ಪತ್ನಿಯ ಹೆಸರಿನಲ್ಲಿ ಈ ಕೆಳಕಂಡ ಸ್ಥಿರಾಸ್ತಿ ಹಾಗೂ ಚರಾಸ್ತಿಗಳನ್ನು ಸಂಪಾದಿಸಿರುತ್ತಾರೆಂದು ವರದಿಯಲ್ಲಿ ತಿಳಿಸಿರುತ್ತಾರೆ.

| | |
|---|---|
| 1 | ಎದುರುದಾರರು ಕ್ರಯ ಪತ್ರ ಸಂಖ್ಯೆ 3982/2008-09 ರಲ್ಲಿ ರೂ. 3,00,000/- ಗಳಿಗೆ ಅವರ ಮತ್ತು ಅವರ ಪತ್ನಿ ಶ್ರೀಮತಿ ಪುಟ್ಟಲಕ್ಷ್ಮಿರವರ ಹೆಸರಿನಲ್ಲಿ ಹಾಸನ ತಾಲ್ಲೂಕು, ಕಸಬಾ ಹೋಬಳಿ, ಚಿಕ್ಕಹೊನ್ನೇನಹಳ್ಳಿ ಸರ್ವೆ ನಂ. 53, ಖಾತಾ ನಂ. 230 ರಲ್ಲಿನ ನಿವೇಶನ ಸಂಖ್ಯೆ 25 (40 * 50) ಅನ್ನು ನೊಂದಣಿ ಮಾಡಿಸಿಕೊಂಡಿದ್ದು ಸದರಿ ನಿವೇಶನವನ್ನು ಖರೀದಿಸುವ ಪೂರ್ವದಲ್ಲಿ ಸಕ್ಷಮ ಪ್ರಾಧಿಕಾರದಿಂದ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನೇದರ ಪ್ರಕಾರ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ. |
| 2 | ಎದುರುದಾರರು ಅವರ ಮತ್ತು ಅವರ ಪತ್ನಿ ಶ್ರೀಮತಿ ಪುಟ್ಟಲಕ್ಷ್ಮಿರವರ ತಂದೆ ಪುಟ್ಟೆಗೌಡ ಬಿನ್ ಲೇಟ್ ಪುಟ್ಟಸ್ವಾಮಿಗೌಡ, ಹಾಸನ ತಾಲ್ಲೂಕು, ಕಸಬಾ ಹೋಬಳಿ, ತಮ್ಲಾಪುರ ಗ್ರಾಮದಲ್ಲಿನ ಆರ್.ಸಿ.ಸಿ. ಮನೆಯ ಖಾತಾ ನಂ. 74 (40 * 30) ಅಡಿ ಅಳತೆಯಲ್ಲಿ (3 ಅಂತಸ್ತಿನ) ಮನೆಯನ್ನು ನಿರ್ಮಿಸಿ ದಿನಾಂಕ 07/01/2005 ರಂದು ದಾನಪತ್ರ ನಂ. 04744 ರಲ್ಲಿ ಅವರ ಹೆಂಡತಿ ಶ್ರೀಮತಿ ಪುಟ್ಟಲಕ್ಷ್ಮಿ ಇವರ ಹೆಸರಿನಲ್ಲಿ ನೊಂದಣಿ ಮಾಡಿಸಿಕೊಂಡಿದ್ದು, ಸದರಿ ನಿವೇಶನವನ್ನು ದಾನಪತ್ರದ ಮುಖಾಂತರ ಪಡೆದಿರುವ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನೇದರ ಪ್ರಕಾರ ಅನುಮತಿಯನ್ನು ಪಡೆದಿರುವುದಿಲ್ಲ. |
| 3 | ಎದುರುದಾರರು ಕ್ರಯ ಪತ್ರ ಸಂಖ್ಯೆ 7544/2012-13 ಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ಹೇರೋಹಳ್ಳಿ ಗ್ರಾಮದ ಸ. ನಂ. |

| | |
|---|---|
| | 8/1ಬಿ ರಲ್ಲಿನ ಜಮೀನಿನಲ್ಲಿ ವಿಂಗಡಿಸಿರುವ ನಿವೇಶನಗಳ ಪೈಕಿ 248ನೇ ಸಂಖ್ಯೆಯ ಖಾತೆಯುಳ್ಳ ನಿವೇಶನ ಸಂಖ್ಯೆ 3 ರಲ್ಲಿನ ಅಳತೆ ಪೂರ್ವ ಪಶ್ಚಿಮ 50 ಅಡಿ, ಉತ್ತರ ದಕ್ಷಿಣ 30 ಅಡಿ ನಿವೇಶನವನ್ನು ರೂ. 28,50,000/- ಗಳಿಗೆ ಮಾರಾಟ ಮಾಡಿದ್ದು ಈ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನೇದರ ಪ್ರಕಾರ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ. |
| 4 | ಎದುರುದಾರರು ಕ್ರಯ ಪತ್ರ ಸಂಖ್ಯೆ 7547/2012-13 ಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ಕರಿವೋಬನಹಳ್ಳಿ ಗ್ರಾಮದ ಸ. ನಂ. 36 ರಲ್ಲಿನ 2 ಎಕರೆ ಜಮೀನಿನಲ್ಲಿ ವಿಂಗಡಿಸಿರುವ ನಿವೇಶನಗಳ ಪೈಕಿ 11-ಎ ರಲ್ಲಿನ ಅಳತೆ ಪೂರ್ವ ಪಶ್ಚಿಮ 40 ಅಡಿ, ಉತ್ತರ ದಕ್ಷಿಣ 30 ಅಡಿ ನಿವೇಶನವನ್ನು ರೂ. 7,20,000/- ಗಳಿಗೆ ಮಾರಾಟ ಮಾಡಿದ್ದು ಈ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನೇದರ ಪ್ರಕಾರ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ. |
| 5 | ಎದುರುದಾರರು ಮತ್ತು ಅವರ ಕುಟುಂಬದ ಸದಸ್ಯರ ಹೆಸರಿನಲ್ಲಿ ವೈ ಜಮನ್ ಹೋಮ್ಸ್ ಲಿಮಿಟೆಡ್, ನಂ. 329 ಹಾಗೂ 331, 2ನೇ ಮಹಡಿ, ಕೃತಿಕಾ ಆರ್ಕೆಡ್, ಎನ್. ಆರ್ ವೃತ್ತ, ಹೊಳೆನರಸಿಪುರ, ಹಾಸನ ರವರಲ್ಲಿ ಅಕೌಂಟ್ ನಂ. 525 ಮತ್ತು ಎಫ್. 576 ರಲ್ಲಿ ಪಡೆದಿರುವ ದಿನಾಂಕ 27/12/2006 ರಂದು ರೂ. 3,00,000/- ಗಳನ್ನು ಸಾಲ ಪಡೆದುಕೊಂಡ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನೇದರ ಪ್ರಕಾರ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ. |
| 6 | ಎದುರುದಾರರು ಅವರ ಹೆಸರಿನಲ್ಲಿ ಹಾಸನ ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಬ್ಯಾಂಕ್ ನಿಯಮಿತ, ತಣ್ಣೀರುಹಳ್ಳ, ಹಾಸನ ರವರಿಂದ ಬೆಳೆ ಸಾಲದ ಖಾತಾ ನಂ. 7/3, 184/1 ಮತ್ತು ಅಕೌಂಟ್ ನಂ. 93/1 ರ ಖಾತೆಗಳನ್ನು ಹೊಂದಿದ್ದು ದಿನಾಂಕ 24/01/2011 ರಲ್ಲಿ ಬೆಳೆ ಸಾಲದ ಖಾತಾ ನಂ. 7/3 ರಲ್ಲಿ ರೂ. 1,00,000/- ದಿನಾಂಕ 04/08/2011 ರಲ್ಲಿ ಬೆಳೆ ಸಾಲದ ಖಾತಾ ನಂ. |

| | |
|---|---|
| | 184/1 ರಲ್ಲಿ ರೂ. 1,00,000/- ಮತ್ತು ದಿ: 24/07/2011 ರಂದು ಬೆಳೆ ಸಾಲದ ಖಾತಾ ನಂ. 93/1 ರಲ್ಲಿ ರೂ. 1,00,000/- ಗಳನ್ನು ಒಟ್ಟು ರೂ. 3,00,000/- ಗಳನ್ನು ಸಾಲವಾಗಿ ಪಡೆದ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನೇದರ ಪ್ರಕಾರ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ. |
| 7 | ಎದುರುದಾರರು ಅವರ ಮತ್ತು ಅವರ ಪತ್ನಿ ಹೆಂಡತಿ ಶ್ರೀಮತಿ ಪುಟ್ಟಲಕ್ಷ್ಮಿ ರವರ ಹೆಸರಿನಲ್ಲಿ ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ, ವಿದ್ಯಾನಗರ ಶಾಖೆ, ಹಾಸನ ಇವರಿಂದ ಮನೆ ಸಾಲದ ಖಾತೆ ಹೆಚ್. ಎಲ್. 85 ರಲ್ಲಿ ರೂ. 9,50,000/- ಗಳನ್ನು ಸಾಲವಾಗಿ ಪಡೆದ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನೇದರ ಪ್ರಕಾರ ಪೂರ್ವಾನುಮತಿಯನ್ನು ಪಡೆದಿರುವುದಿಲ್ಲ. |

3) ಎದುರುದಾರರು ತನಿಖೆ ಕಾಲದಲ್ಲಿ ಯಾವುದೇ ಸ್ಥಿರಾಸ್ತಿಯನ್ನು ಖರೀದಿಸುವ ಮತ್ತು ಮಾರಾಟ ಮಾಡುವ ಪೂರ್ವದಲ್ಲಿ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯನ್ನು ಪಡೆಯದೆ ನಿಯಮ 23 (2)(3) ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ (ಪ್ರಸ್ತುತ ನಿಯಮ 24 (3)(4) ರನ್ವಯ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಗಳು 2021) ರ ನಿಯಮಗಳನ್ನು ಪಾಲಿಸದೆ ಕರ್ತವ್ಯ ಲೋಪವೆಸಗಿರುವುದು ಮತ್ತು ಪ್ರಸ್ತುತ ಕ.ನಾ.ಸೇ.(ನಡತೆ) ನಿಯಮ 3 (1) (i) ರಿಂದ (iii) ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

4) ತನಿಖಾಧಿಕಾರಿಯವರು ಸಂಗ್ರಹಿಸಿದ ದಾಖಲೆಗಳಿಂದ ಎದುರುದಾರರು ಕಾನೂನು ಸಮ್ಮತ ಆದಾಯಕ್ಕಿಂತ ಅಸಮತೋಲನವಾಗಿ ಆಸ್ತಿಗಳನ್ನು ಅವರ ಹೆಸರಿನಲ್ಲಿ ಮತ್ತು ಅವರ ಪತ್ನಿಯ ಹೆಸರಿನಲ್ಲಿ ಹೊಂದಿರುವುದು ಹಾಗೂ ಅನುಮತಿ ಇಲ್ಲದೆ ಸ್ಥಿರಾಸ್ತಿ/ಚರಾಸ್ತಿಯನ್ನು ಖರೀದಿಸಿರುವುದು ಹಾಗೂ

ಮಾರಾಟ ಮಾಡಿರುವ ಅಂಶಗಳು ನಿಯಮಗಳನ್ನು ಪಾಲಿಸದೇ ಇರುವುದು ಎದುರುದಾರರ ದುರ್ನಡತೆಯನ್ನು ತೋರಿಸುತ್ತದೆ.

5) ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಷಿಯನ್ನು ದಿನಾಂಕ 21/09/2022 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯನ್ನು ಪರಿಶೀಲಿಸಲಾಗಿ ಪರಿವೀಕ್ಷಣಾ ಟಿಪ್ಪಣಿಯಲ್ಲಿ ನಮೂದಿಸಿದ ಚರ ಮತ್ತು ಸ್ಥಿರ ಆಸ್ತಿಗಳ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ನಿಯಮ 23 ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ರ ಪ್ರಕಾರ ಅನುಮತಿಯನ್ನು ಪಡೆದಿರುವುದಿಲ್ಲವೆಂದು ಒಪ್ಪಿಕೊಂಡಿರುತ್ತಾರೆ. ಎದುರುದಾರರು ಸರ್ಕಾರಿ ನೌಕರ ವ್ಯಾಪ್ತಿಗೆ ಬರುವುದಿಲ್ಲವೆಂದು ತಿಳಿದು ಪೂರ್ವಾನುಮತಿಯನ್ನು ಪಡೆಯಲು ಯಾವುದೇ ಕ್ರಮ ವಹಿಸಿರುವುದಿಲ್ಲ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಅನ್ವಯಿಸುವ ಕೆ.ಸಿ.ಎಸ್. ನಿಯಮಗಳು ನಮ್ಮ ಸಂಘದ ನೌಕರರಾದ ನಮ್ಮಗಳಿಗೆ ಅನ್ವಯಿಸುವುದಿಲ್ಲವೆಂದು ಮೌಖಿಕವಾಗಿ ಹೇಳಿದ್ದರಿಂದ ನಾನು ಯಾವುದೇ ಕರ್ತವ್ಯ ಲೋಪ ಎಸಗಿಲ್ಲವೆಂದು ತಮ್ಮ ಸಮಜಾಯಿಷಿಯಲ್ಲಿ ವಿವರಿಸಿರುತ್ತಾರೆ. ಆದರೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ನಿಯಮ 127-ಎ ಸಹಕಾರ ಸಂಘಗಳ (ಪದಾಧಿಕಾರಿಗಳು, ಸದಸ್ಯರು ಮತ್ತು ನೌಕರರು) ಸಾರ್ವಜನಿಕ ಸೇವಕರಾಗಿರುವುದು-ಮಾರಾಟ ಹಾಗೂ ವಸೂಲಿ ಅಧಿಕಾರಿಗಳೂ ಸೇರಿದಂತೆ ಸಹಕಾರ ಸಂಘದ ಪ್ರತಿಯೊಬ್ಬ ಪದಾಧಿಕಾರಿಯನ್ನು (ಮಂಡಲಿ) ಯ ಪ್ರತಿಯೊಬ್ಬ ಸದಸ್ಯನನ್ನು ಮತ್ತು ಪ್ರತಿಯೊಬ್ಬ ನೌಕರನನ್ನು ಭಾರತ ದಂಡಸಂಹಿತೆಯ 21ನೇ ಪ್ರಕರಣದ ಅರ್ಥ ವ್ಯಾಪ್ತಿಯಲ್ಲಿ ಸಾರ್ವಜನಿಕ ಸೇವಕನೆಂದು ಭಾವಿಸತಕ್ಕದ್ದು ಎಂಬ ನಿಯಮವಿರುತ್ತದೆ. ಆದ್ದರಿಂದ ಸದರಿಯವರು ಯಾವುದೇ ಸ್ಥಿರಾಸ್ತಿಗಳನ್ನು ಖರೀದಿಸುವ ಪೂರ್ವದಲ್ಲಿ ಪೂರ್ವಾನುಮತಿಯನ್ನು ಸಕ್ಷಮ ಪ್ರಾಧಿಕಾರದಿಂದ ಪಡೆಯಬೇಕಾಗುತ್ತದೆ ಹಾಗೂ ಚರಾಸ್ತಿಗಳನ್ನು ಖರೀದಿಸಿದ ನಂತರ ಒಂದು ತಿಂಗಳೊಳಗಾಗಿ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಿ ಅನುಮತಿ ಪಡೆದಿರುವುದಿಲ್ಲ. ಆದ್ದರಿಂದ ಎದುರುದಾರರು ನೀಡಿರುವ ಸಮಜಾಯಿಷಿ

ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

6) ಆದ್ದರಿಂದ ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರದಡಿ, ಈ ವರದಿಯ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಈ ಕೆಳಕಂಡಂತೆ ಶಿಫಾರಸ್ಸು ಮಾಡಲಾಗುತ್ತಿದೆ.

(1) ಎದುರುದಾರರ ವಿರುದ್ಧ ಅಸಮತೋಲನ ಆಸ್ತಿಯನ್ನು ಹೊಂದಲು ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಮತ್ತು ನಂತರದಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ತಿಳಿಸದೆ ಇರುವ ವಿಚಾರವಾಗಿ ಮಾತ್ರ ಇಲಾಖಾ ವಿಚಾರಣೆ ಮಾಡಲು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ, 1957 ರ ನಿಯಮ 14(ಎ) ರಡಿ ಉಪಲೋಕಾಯುಕ್ತರಿಗೆ ವಹಿಸಬೇಕೆಂದು ಕೋರಿದೆ ಹಾಗೂ

(2) ಭಾರತದ ಸರ್ವೋಚ್ಛ ನ್ಯಾಯಾಲಯದ ತೀರ್ಪು AIR 1978 of Hon'ble Supreme Court, page 3047, State of Karnataka v/s Kempaiah, ಈ ಕೇಸಿನಲ್ಲಿ ಹೇಳಿರುವಂತೆ ಎದುರುದಾರರು ಕಾನೂನು ಸಮ್ಮತದ ಆದಾಯಕ್ಕಿಂತ ಅಸಮತೋಲನ ಆದಾಯವನ್ನು ಹೇಗೆ ಹೊಂದಿದರು ಎಂಬುದರ ಬಗ್ಗೆ ವಿಚಾರಣೆ ನಡೆಸಲು ಅವಕಾಶವಿರುವುದಿಲ್ಲ. ಆದುದರಿಂದ ಸದರಿ ವಿಷಯಕ್ಕೆ ಸಂಬಂಧಿಸಿದ ವಿಚಾರಣೆಯನ್ನು ಸರ್ಕಾರವೇ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ, 1957 ರ ಅಡಿಯಲ್ಲಿ ವಿಚಾರಣೆ ಮಾಡಲು ಕ್ರಮ ಕೈಗೊಳ್ಳಬಹುದಾಗಿದೆ.

7) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

2-21.5.23

**(ನ್ಯಾಯಮೂರ್ತಿ ಕೆ. ಎನ್. ಫಣೀಂದ್ರ)**
ಉಪಲೋಕಾಯುಕ್ತರು-2
ಕರ್ನಾಟಕ ರಾಜ್ಯ, ಬೆಂಗಳೂರು.